ರಾಷ್ಟ್ರ ಜಾಗೃತಿಯ ದೈನಿಕ

# ಹೊಸ ದಿಗಂತ

**Sunday 04th August 2024**

## RVCE: Honorary Dedication to Graduates

### ಬ್ರಿಗೇಡ್ ಗ್ರೂಪ್‌ನ ಕಾರ್ಯಾಧ್ಯಕ್ಷ ಎಂ.ಆರ್.ಜೈಶಂಕರ್ ಅಭಿಮತ

# ಆವಿಷ್ಕಾರದಲ್ಲಿ ಇಂಜಿನಿಯರ್‌ಗಳ ಪಾತ್ರ ಹಿರಿದು



**ಕೆಂಗೇರಿ:** ದೇಶವನ್ನು ಅಭಿವೃದ್ಧಿಯ ಪಥದತ್ತ ಕೊಂಡೊಯ್ಯುವ ತಾಂತ್ರಿಕ ಹಾಗೂ ವೈಜ್ಞಾನಿಕ ಹೊಸ ಹೊಸ ಆವಿಷ್ಕಾರಗಳ ಹಿಂದೆ ಇಂಜಿನಿಯರ್‌ಗಳ ಪಾತ್ರ ಮಹತ್ವದಾಗಿದೆ ಎಂದು ಬ್ರಿಗೇಡ್ ಗ್ರೂಪ್‌ನ ಕಾರ್ಯಾಧ್ಯಕ್ಷ ಎಂ.ಆರ್.ಜೈ ಶಂಕರ್ ತಿಳಿಸಿದರು.

ಮೈಸೂರು ಮುಖ್ಯರಸ್ತೆಯಲ್ಲಿರುವ ಪೂರ್ಣಿಮಾ ಪ್ಯಾಲೇಸ್‌ನಲ್ಲಿ ಆರ್.ವಿ.ತಾಂತ್ರಿಕ ಮಹಾ ವಿದ್ಯಾಲಯದ ವತಿಯಿಂದ ಹಮ್ಮಿಕೊಂಡಿದ್ದ 2024ರ ಅಂತಿಮ ವರ್ಷದ ಇಂಜನಿಯರಿಂಗ್ ವಿಭಾಗದ ಅರ್ಹ 1,140 ವಿದ್ಯಾರ್ಥಿಗಳಿಗೆ ಪದವಿ ಪ್ರಧಾನದ ಘಟಿಟೋತ್ಸವದಲ್ಲಿ ಮಾತನಾಡಿದ ಅವರು, ನಿಮ್ಮ ಪದವಿಗಳಿಕೆಯ ಹಿಂದೆ 4 ವರ್ಷಗಳ ಶ್ರಮ, ತಂದೆ-ತಾಯಂದಿರ ಬೆಂಬಲ, ಗುರುಗಳು ನೀಡಿದ ಮೌಲ್ಯಯುತ ಶಿಕ್ಷಣ ಕಾರಣವಾಗಿದೆ ಎಂದರು.

ಇಂದಿನ ಯುವ ಪೀಳಿಗೆ ಎದುರಿಸಬೇಕಾಗಿರುವುದು ಪ್ರಾದೇಶಿಕ ಸವಾಲುಗಳನ್ನಲ್ಲ ಬದಲಾಗಿ ಜಾಗತಿಕ ಮಟ್ಟದಲ್ಲಿ ಉದ್ಭವಿಸುವ ಸವಾಲುಗಳನ್ನು ಮೆಟ್ಟಿ ನಿಲ್ಲಬೇಕು. ನಮ್ಮ ದೇಶದಲ್ಲಿ ಸಾಧನೆ ಮಾಡುವವರಿಗೆ ಅವಕಾಶಗಳು ಬಹಳಷ್ಟು ಇವೆ. ಅದನ್ನು ಬಳಸಿಕೊಳ್ಳುವ ಮನೋಭಾವವನ್ನು ನಾವು ರೂಡಿಸಿಕೊಳ್ಳಬೇಕು. ನಮಗೆ ಸಹಜ ಸಾಮರ್ಥ್ಯವಿರುವ ವಿಷಯದ ಬಗ್ಗೆ ಹೆಚ್ಚಿನ ಗಮನವನ್ನು ಹರಿಸಿ ಶ್ರಮವಹಿಸಿ ದುಡಿದರೆ ಸಮಾಜದಲ್ಲಿ ಉನ್ನತ ಸ್ಥಾನವನ್ನು ಪಡೆಯಬಹುದು ಎಂದು ತಿಳಿಸಿದರು. ರಾಷ್ಟ್ರೀಯ ಶಿಕ್ಷಣ ಸಮಿತಿ ಟ್ರಸ್ಟ್‌ನ ಅಧ್ಯಕ್ಷ ಡಾ. ಎಂ.ಪಿ.ಶ್ಯಾಮ್ ಮಾತನಾಡಿ, ಸಮಾಜದಿಂದ ಉಪಕೃತರಾದ ನಾವು ಸಮಾಜಕ್ಕೆ ನಮ್ಮಿಂದಾದ ಸೇವೆ ಸಲ್ಲಿಸದೇ ಹೋದರೆ ನಮ್ಮ ವ್ಯಕ್ತಿತ್ವಕ್ಕೆ ಘನತೆಯಿರುವುದಿಲ್ಲ. ತಾವು ಕಲಿತ ಸಂಸ್ಥೆಯ ಬಗ್ಗೆ ಉತ್ತಮ ವಿಷಯಗಳನ್ನು ಪಸರಿಸಿ ಸಂಸ್ಥೆಯ ಉನ್ನತಿಗೆ ಸಹಕಾರವನ್ನು ನೀಡಬೇಕು ಎಂದು ಕರೆ ನೀಡಿದರು.

ಆರ್.ವಿ.ತಾಂತ್ರಿಕ ಮಹಾವಿದ್ಯಾಲಯದ ಪ್ರಾಂಶುಪಾಲ ಡಾ. ಕೆ.ಎನ್.ಸುಬ್ರಹ್ಮಣ್ಯ, ಉಪಪ್ರಾಂಶುಪಾಲೆ ಡಾ.ಕೆ.ಎಸ್.ಗೀತಾ , ಆರ್‌ಎಸ್ ಎಸ್‌ಟಿ ಉಪಾಧ್ಯಕ್ಷ ಡಾ. ಎ.ಸಿ. ಚಂದ್ರಶೇಖರರಾಜು, ಗೌರವ ಕಾರ್ಯದರ್ಶಿ ಡಾ. ಎವಿಎಸ್ ಮೂರ್ತಿ, ಜಂಟಿ ಕಾರ್ಯದರ್ಶಿ ಡಿ.ಪಿ. ನಾಗರಾಜ್ ಸೇರಿದಂತೆ ಇತರರಿದ್ದರು.

### ಪದವೀಧರರಿಗೆ ಗೌರವ ಸಮರ್ಪಣೆ

**ಇದೇ ವೇಳೆ 14ನೇ ಪದವಿ ಪ್ರಧಾನ ಸಮಾರಂಭದಲ್ಲಿ 12 ಚಿನ್ನದ ಪದಕಗಳು, 12 ಬೆಳ್ಳಿ ಪದಕಗಳು, 18 ಬಿಇ ಪದವೀಧರರಿಗೆ ಗೌರವ ಸಮರ್ಪಣೆ ಸೇರಿದಂತೆ ಒಟ್ಟು 1,140 ಪದವಿ ಪ್ರಮಾಣಪತ್ರಗಳನ್ನು ವಿದ್ಯಾರ್ಥಿಗಳಿಗೆ ವಿತರಣೆ ಮಾಡಲಾಯಿತು.**